ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar



Volume: 01, Issue: 01 RNI Number : KNKAN/25/A2770 01-01-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :01 ರಾಯಚೂರು 01-01-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

12 ಮಂದಿ ಐಎಎಸ್ ಅಧಿಕಾರಿಗಳ ವರ್ಗಾವಣೆ, 66 ಮಂದಿ ಐಎಎಸ್ ಅಧಿಕಾರಿಗಳಿಗೆ ಮುಂಭಡ್ತಿ

ಬೆಂಗಳೂರು,ಡಿ.31–

ಐದು ಮಂದಿ ಜಿಲ್ಲಾಧಿಕಾರಿಗಳು ಸೇರಿದಂತೆ 12 ಮಂದಿ ಐಎಎಸ್ ಅಧಿಕಾರಿಗಳನ್ನು ಬುಧವಾರ ವರ್ಗಾವಣೆ ಮಾಡಿರುವ ರಾಜ್ಯ ಸರಕಾರ, 66 ಮಂದಿ ಐಎಎಸ್ ಅಧಿಕಾರಿಗಳಿಗೆ ಮುಂಭಡ್ತಿ ನೀಡಿದ್ದು, ಈ ಪೈಕಿ ಕೆಲ ಅಧಿಕಾರಿಗಳಿಗೆ ಹೆಚ್ಚುವರಿ ಹೊಣೆಗಾರಿಕೆ ನೀಡಿ ಆದೇಶ ಹೊರಡಿಸಿದೆ.

ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ವಿ.ರಶ್ಮಿ ಮಹೇಶ್, ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಾಟೇರಿಯಾ, ವಾಣಿಜ್ಯ ಇಲಾಖೆಯ ಜಂಟಿ ಕಾರ್ಯದರ್ಶಿ ದೀಪಕ್ ಜೈನ್, ಆರ್ಥಿಕ ಇಲಾಖೆಯ ಜಂಟಿ ಕಾರ್ಯದರ್ಶಿ ಡಾ. ಏಕ್‌ರೂಪ್ ಕೌರ ಬಿಎಂಆರ್‌ಸಿಎಲ್‌ನ ವ್ಯವಸ್ಥಾಪಕ ನಿರ್ದೇಶಕ ರವಿಶಂಕರ್ ಜೆ. ಸೇರಿದಂತೆ 66 ಮಂದಿ ಐಎಎಸ್ ಅಧಿಕಾರಿ ಮುಂಭಡ್ತಿ ನೀಡಲಾಗಿದೆ.

ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮುಹಮ್ಮದ್ ಮಹ್ಸಿನ್ ಅವರಿಗೆ ಮುಂಬಡ್ತಿ ನೀಡಿ, ಆರೋಗ್ಯ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯರ್ಶಿಯಾಗಿ ಹೆಚ್ಚುವರಿ ಹೊಣೆಗಾರಿಕೆ ನೀಡಲಾಗಿದೆ. ಆರೋಗ್ಯ ಇಲಾಖೆಯ ಆಯುಕ್ತ ಶಿವಕುಮಾರ್ ಅವರನ್ನು ಮುಂಬಡ್ತಿ ನೀಡಿ, ಬಿಎಂಟಿಸಿಯ ವ್ಯವಸ್ಥಾಪಕ ನಿರ್ದೇಶಕರಾಗಿ ವರ್ಗಾವಣೆ ಮಾಡಲಾಗಿದೆ.

ಐದು ಜಿಲ್ಲಾಧಿಕಾರಿಗಳ ವರ್ಗಾವಣೆ: ಚಿಕ್ಕಮಗಳೂರು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅವರನ್ನು ಬೆಂಗಳೂರಿನ ಕಂದಾಯ ವಿಭಾಗದ ಆಯುಕ್ತರಾಗಿ ವರ್ಗಾವಣೆ ಮಾಡಲಾಗಿದೆ. ಅವರ



ಸ್ಥಾನಕ್ಕೆ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ನಾಗರಾಜ ಎನ್.ಎಂ. ಅವರನ್ನು ವರ್ಗಾಯಿಸಲಾಗಿದೆ.

ಶಿವಮೊಗ್ಗ ಜಿಲ್ಲಾಧಿಕಾರಿ ಗುರುದತ್ ಹೆಗಡೆ ಅವರನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಯುಕ್ತರನ್ನಾಗಿ ಹಾಗೂ ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರನ್ನು ಪಶುಸಂಗೋಪನಾ ಇಲಾಖೆಯ ಆಯುಕ್ತರನ್ನಾಗಿ ವರ್ಗಾವಣೆ ಮಾಡಲಾಗಿದೆ. ತುಮಕೂರು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅವರನ್ನು ತುಮಕೂರು ಜಿ.ಪಂ ಸಿಇಒ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ. ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಯಾಗಿದ್ದ ರವೀಂದ್ರ ಪಿ.ಎನ್. ಅವರನ್ನು ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕರನ್ನಾಗಿ ವರ್ಗಾಯಿಸಲಾಗಿದ್ದು, ತುಮಕೂರು ಜಿ.ಪಂ ಸಿಇಒ ಆಗಿದ್ದ ಪ್ರಭು ಜಿ. ಅವರನ್ನು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಯಾಗಿ ನೇಮಿಸಲಾಗಿದೆ. ಪಶುಸಂಗೋಪನಾ ಇಲಾಖೆಯ ಆಯುಕ್ತೆ ಶ್ರೀರೂಪಾ ಅವರನ್ನು ಚಾಮರಾಜನಗರ ಜಿಲ್ಲಾಧಿಕಾರಿ ಯಾಗಿ ವರ್ಗಾವಣೆ ಮಾಡಲಾಗಿದೆ. ಕೃಷಿ ಇಲಾಖೆಯ ಆಯುಕ್ತ ಪಾಟೀಲ್ ಯಳಗೌಡ ಶಿವನಗೌಡ ಅವರನ್ನು ತೋಟಗಾರಿಕಾ ಇಲಾಖೆಯ ನಿರ್ದೇಶಕರಾಗಿ ವರ್ಗಾವಣೆ ಮಾಡಲಾಗಿದೆ.

ಐಪಿಎಸ್ ಅಧಿಕಾರಿಗಳ ಪದೋನ್ನತಿ ವರ್ಗಾವಣೆ

ಬೆಂಗಳೂರು, ಡಿ.31:

ರಾಯಚೂರು ಜಿಲ್ಲಾ ಪೊಲೀಸ್ ಅಧೀಕ್ಷಕರಾಗಿದ್ದ ಶ್ರೀ ಎಂ. ಪುಟ್ಟ ಮಾದಯ್ಯ, ಐಪಿಎಸ್ (ಕೆಎನ್: 2012) ಅವರಿಗೆ ಉಪ ಪೊಲೀಸ್ ಮಹಾನಿರೀಕ್ಷಕ (ಡಿಐಜಿ) ಹುದ್ದೆಗೆ ಪದೋನ್ನತಿ ನೀಡಿ, ಐಪಿಎಸ್ (ವೇತನ) ನಿಯಮಗಳು2016ರ ಪ್ರಕಾರ ಲೆವೆಲ್ 13ಎ ವೇತನ ಶ್ರೇಣಿಯಲ್ಲಿ 01.01.2026 ರಿಂದ ಜಾರಿಗೆ ಬರುವಂತೆ ಆದೇಶಿಸಲಾಗಿದೆ. ಅವರು ಕಲಬುರಗಿಯ ಪ್ರಿನ್ಸಿಪಲ್ ಪೊಲೀಸ್ ತರಬೇತಿ ಕೇಂದ್ರದ ಡಿಐಜಿ ಆಗಿ ತಕ್ಷಣದಿಂದ ಹಾಗೂ ಮುಂದಿನ ಆದೇಶದವರೆಗೆ ನಿಯೋಜನೆಗೊಂಡಿದ್ದಾರೆ.

ಇದರೊಂದಿಗೆ, ಸಿಐಡಿ,



ಬೆಂಗಳೂರುಯ ಪೊಲೀಸ್ ಅಧೀಕ್ಷಕರಾಗಿದ್ದ ಶ್ರೀ ಅರುಣಾಂಶು ಗಿರಿ, ಐಪಿಎಸ್ (ಕೆಎನ್: 2015) ಅವರನ್ನು ರಾಯಚೂರು ಜಿಲ್ಲಾ ಪೊಲೀಸ್ ಅಧೀಕ್ಷಕರಾಗಿ ತಕ್ಷಣದಿಂದ ಹಾಗೂ ಮುಂದಿನ ಆದೇಶದವರೆಗೆ ವರ್ಗಾವಣೆ ಮಾಡಲಾಗಿದೆ. ಅವರು ವರ್ಗಾವಣೆಗೊಂಡ ಶ್ರೀ ಎಂ. ಪುಟ್ಟಮಾದಯ್ಯ ಅವರ ಸ್ಥಾನವನ್ನು ಭರ್ತಿಮಾಡಲಿದ್ದಾರೆ.

ಭೂಮಿ ಅತಿಕ್ರಮಣ-ನಕಲು ದಾಖಲೆ ಸೃಷ್ಟಿ ಆರೋಪ

ಅಂಬೋಜಿ ರಾವ್ ಕುಟುಂಬದ ವಿರುದ್ಧ ಗಡಿಪಾರಿಗೆ ಪ್ರವೀಣ್ ಕುಮಾರ್ ಆಗ್ರಹ

ಕಲ್ಯಾಣ ಸಂಜೆ ಸುದ್ದಿ

ರಾಯಚೂರು,ಡಿ.31–

ಭೂಮಿಯನ್ನು ಅತಿಕ್ರಮಣ ಮಾಡಿ ನಕಲು ದಾಖಲೆಗಳನ್ನು ಸೃಷ್ಟಿಸಿ ಜನರಿಗೆ ಮೋಸ ಮಾಡಿರುವ ಆಂಬೋಜಿ ರಾವ್ ತಂದೆ ಹೀರ ಲಾಲ್ ಹಾಗೂ ಅವರ ಕುಟುಂಬ ದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು ಗಡಿಪಾರು ಮಾಡಬೇಕು ಎಂದು ಭೀಮಾ ಆರ್ಮಿ ಸಂಘಟನೆಯ ಜಿಲ್ಲಾ ಅಧ್ಯಕ್ಷ ಪ್ರವೀಣ್ ಕುಮಾರ ಅವರು ಆಗ್ರಹಿಸಿದರು.

ಇಂದು ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯರಮರಸ್ ಸೀಮಾಂತರ



ದಲ್ಲಿರುವ ಸರ್ವೆ ನಂಬರ 114/15, ವಿಸ್ತೀರ್ಣ 3 ಎಕರೆ 3 ಗುಂಟ ಜಮೀನಿನ ಮೂಲ ಪಟ್ಟದಾರರು ಸುಗುಣ ಬಾಯಿ ಗಂಡ-ದತ್ತುರಾವ್ ಆಗಿದ್ದಾರೆ. ಸುಗುಣ ಬಾಯಿ ಅವರ ಮರಣದ ನಂತರ ಆಂಬೋಜಿ ರಾವ್ ತಂದೆ ಹೀರಲಾಲ್ ಹಾಗೂ ಸ್ವಾತಿ ಗಂಡ-ಆಂಬೋಜಿ ರಾವ್ ಅವರು ಸೇರಿಕೊಂಡು ನಕಲು ಮರಣ ಪ್ರಮಾಣ ಪತ್ರ, ನಕಲು ವಂಶಾವಳಿ ದಾಖಲೆಗಳು ಹಾಗೂ ನಕಲು ಆಧಾರ ಕಾರ್ಡ್ಗಳನ್ನು ಸೃಷ್ಟಿಸಿ ಅಧಿಕಾರಿಗಳ ಸಹಕಾರದಿಂದ ಜಮೀನನ್ನು ತಮ್ಮ ಹೆಸರಿಗೆ ವರ್ಗಾಯಿಸಿಕೊಂಡಿದ್ದಾರೆ ಎಂದು ಆರೋಪಿಸಿದರು.

ಮಹಾನಗರ ಪಾಲಿಕೆ ಸಿಬ್ಬಂದಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಸರ್ಕಾರದ ನಿಯಮಾವಳಿಗಳನ್ನು ಉಲ್ಲಂಘಿಸಿ ಮರಣ ಪ್ರಮಾಣ ಪತ್ರ ನೀಡಿರುವುದು ಗಂಭೀರ ಅಪರಾಧವಾಗಿದ್ದು, ಇದರಲ್ಲಿ ತಹಸೀಲ್ದಾರ ಕಚೇರಿ, ಹೋಬಳಿ ಮಟ್ಟದ ಅಧಿಕಾರಿಗಳು ಹಾಗೂ ಇತರರು ಹಣದ ಲಾಲಸೆಯಿಂದ ಶಾಮೀಲಾಗಿದ್ದಾರೆ ಎಂದು

2ನೇ ಪುಟಕ್ಕೆ

ಅನಧಿಕೃತ ತರಕಾರಿ ಮಾರುಕಟ್ಟೆ ತೆರವುಗೊಳಿಸಲು ಆಗ್ರಹ

ರಾಯಚೂರು,ಡಿ.31–

ನಗರದ ಎಂ. ಈರಣ್ಣ ವೃತ್ತದಿಂದ ಆಕಾಶವಾಣಿ ಕೇಂದ್ರದತ್ತ ಹೋಗುವ ಮಾರ್ಗ ಮಧ್ಯದಲ್ಲಿ ಯಾವುದೇ ಅಧಿಕೃತ ಅನುಮತಿ ಇಲ್ಲದೆ ಅನಧಿಕೃತವಾಗಿ ತರಕಾರಿ ಮಾರುಕಟ್ಟೆ ಸ್ಥಾಪನೆಯಾಗಿದ್ದು, ಅದನ್ನು ಕೂಡಲೇ ತೆರವುಗೊಳಿಸಬೇಕೆಂದು ರಾಯಚೂರು ನಗರ ಉಸ್ಮಾನೀಯ ತರಕಾರಿ ಮಾರಾಟಗಾರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎನ್. ಮಹಾವೀರ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮಾರುಕಟ್ಟೆಗೆ ನಗರಸಭೆ ಅಥವಾ ಮಹಾನಗರ ಪಾಲಿಕೆಯಿಂದ ಯಾವುದೇ ಅನುಮತಿ ನೀಡಿಲ್ಲ. ಖಾಸಗಿ ವ್ಯಕ್ತಿಯ ಜಾಗದಲ್ಲಿ ಕಾನೂ ನುಬಾ



ಹಿರವಾಗಿ ತರಕಾರಿ ಮಾರುಕಟ್ಟೆ ನಡೆಸಲಾಗುತ್ತಿದ್ದು, ಇದು ಸಂಪೂರ್ಣವಾಗಿ ಖಂಡನೀಯ ಎಂದು ಆರೋಪಿಸಿದರು.

ಖಾಸಗಿ ಜಾಗದಲ್ಲಿ ಮಾರುಕಟ್ಟೆ ಸ್ಥಾಪಿಸಲು ಅನುಮತಿ ಇಲ್ಲದಿರುವಾಗಲೂ ವ್ಯಾಪಾರ ನಡೆಯುತ್ತಿರುವ ಹಿನ್ನೆಲೆಯಲ್ಲಿ, ಜಾಗದ ಮಾಲಿಕನ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಒತ್ತಾಯಿಸಿದರು. ಅಲ್ಲದೆ, ಖಾಸಗಿ ಜಾಗದಲ್ಲಿ ನಡೆಯುತ್ತಿರುವ ಕರ ವಸೂಲಿಯನ್ನು ಯಾರು ಮಾಡುತ್ತಿದ್ದಾರೆ? ವಸೂಲಾದ ಹಣ ಯಾರಿಗೆ ಹೋಗುತ್ತಿದೆ ಎಂಬುದನ್ನು ವ್ಯಾಪಾರಸ್ಥರು ಮತ್ತು ರೈತರು ಸ್ಪಷ್ಟಪಡಿಸಬೇಕೆಂದು ಪ್ರಶ್ನಿಸಿದರು. ಜಾಗದ ಮಾಲಿಕನಿಗೆ ಕರ ಪಾವತಿ ಸಲಾಗುತ್ತಿದೆ ಎಂಬುದು ಸಾಬೀ ತಾದಲ್ಲಿ, ಕಾನೂನುಬಾಹಿರ ಕರವ ಸೂಲಿಗೆ ಜಾಗದ ಮಾಲಿಕನೇ ನೇರ ಜವಾಬ್ದಾರನಾಗುತ್ತಾನೆ ಎಂದರು.

ಈ ಸಂದರ್ಭ ಎಂ. ಈರಣ್ಣ ತರಕಾರಿ ಮಾರುಕಟ್ಟೆಯ ಕೆಲ ಮಾರಾಟಗಾರರು ನನ್ನ ಮೇಲೆ

2ನೇ ಪುಟಕ್ಕೆ

ಸಿಎಂ ಸಿದ್ಧರಾಮಯ್ಯ ದಿ.3ರಂದು ಜಿಲ್ಲೆಯಲ್ಲಿ ಪ್ರವಾಸ

ರಾಯಚೂರು,ಡಿ.31–

ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಜನವರಿ 03 ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಅದು ಮಧ್ಯಾಹ್ನ 12 ಗಂಟೆಗೆ ಬೆಂಗಳೂರಿನ ಹೆಚ್‌ಎಎಲ್ ವಿಮಾನ ನಿಲ್ದಾಣದಿಂದ ನಿರ್ಗಮಿಸಿ, ಬಳ್ಳಾರಿ ಜಿಲ್ಲೆಯ ತೋರಣಗಲ್ಲು ಏರಸ್ಟ್ರಿಪಗೆ 12.50ಕ್ಕೆ ಆಗಮಿಸುವರು. 1.30ಕ್ಕೆ ಹೊರಟು 2 ಗಂಟೆಗೆ ಜಿಂದಾಲನಿಂದ ಸಿಂಧನೂರಿನ ಸರ್ಕ್ಯೂಟ್ ಹೌಸ್ ಹತ್ತಿರದ ಹೆಲಿಪ್ಯಾಡ್‌ಗೆ ಆಗಮಿಸುವರು. ಮಧ್ಯಾಹ್ನ 2 ಗಂಟೆ



ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

ಮಧ್ಯಾಹ್ನ 3 ಗಂಟೆಗೆ ಸಿಂಧನೂರ ಸರ್ಕ್ಯೂಟ್ ಹೌಸ್ ಹತ್ತಿರದ ಹೆಲಿಪ್ಯಾಡನಿಂದ ನಿರ್ಗಮಿಸಿ, 3.30ಕ್ಕೆ ಸಿಂಧನೂರು ತಾಲ್ಲೂಕಿನ ಸೋಮಲಾಪುರ ಗ್ರಾಮದ ಶ್ರೀ ಅಂಬಾಮಠದ ಆವರಣದಲ್ಲಿನ ಹೆಲಿಪ್ಯಾಡಗೆ ಆಗಮಿಸಿ, ಅಂಬಾಮಠದ ಆವರಣದಲ್ಲಿ ಸಿಂಧನೂರ ತಾಲೂಕಾಡಳಿತ, ತಾಲ್ಲೂಕು ಪಂಚಾಯತ್, ಧಾರ್ಮಿಕ ದತ್ತಿ ಇಲಾಖೆ ಹಾಗೂ ಶ್ರೀ ಅಂಬಾದೇವಿ

2ನೇ ಪುಟಕ್ಕೆ

ವಿಶ್ವ ವಿಕಲಚೇತನರ ದಿನಾಚರಣೆ

ವಿಕಲಚೇತನರು ಸಮಾಜದ ಮುಖ್ಯವಾಹಿನಿಗೆ ಬರಬೇಕು:ಎಡಿಸಿ

ರಾಯಚೂರು ಡಿ.31–

ವಿಕಲಚೇತನರು ಕೀಳರಿಮೆ ಬಿಟ್ಟು ತಮ್ಮ ಸವಾಲುಗಳನ್ನು ಸ್ವೀಕರಿಸಿ ಸಾಮರ್ಥ್ಯವನ್ನು ಅರಿತು ಸಮಾಜದ



ಮುಖ್ಯವಾಹಿನಿಗೆ ಬರಬೇಕು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಲಹೆ ನೀಡಿದರು.

ಡಿಸೆಂಬರ್ 31ರ ಬುಧವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷಾರತಾ ಇಲಾಖೆ, ಮತ್ತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿಕಲಚೇತನರ ಕಲ್ಯಾಣ ಕ್ಷೇತ್ರದಲ್ಲಿ ಶ್ರಮಿಸುತ್ತಿರುವ ಸಂಘ, ಸಂಸ್ಥೆ ಒಕ್ಕೂಟಗಳು ರಾಯಚೂರು ಇವರ ಸಂಯುಕ್ತಾ ಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ- 2025ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇವರು ಎಲ್ಲರಿಗೂ ಆಳುವ ಶಕ್ತಿ ನೀಡಿದ್ದಾನೆ. ಪ್ರತಿಯೊಬ್ಬರಲ್ಲಿಯೂ ಅಗಾಧ ಶಕ್ತಿ, ಸಾಮರ್ಥ್ಯ,

2ನೇ ಪುಟಕ್ಕೆ

ಉದ್ಯೋಗ ಮೇಳದ ಪೂರ್ವಭಾವಿ ಸಭೆ

ಉದ್ಯೋಗ ಮೇಳ ಯಶಸ್ವಿಗೆ ಸಿದ್ಧತೆ ಮಾಡಿಕೊಳ್ಳಿ: ಶರಣಬಸವರಾಜ



ರಾಯಚೂರು,ಡಿ.31

ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಉದ್ಯೋಗ ಮೇಳಕ್ಕೆ ಬೇಕಾಗುವ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಅಲ್ಲದೆ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿರುದ್ಯೋಗಿಗಳು ಭಾಗಿಯಾಗಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕರಾದ ಶರಣಬಸವರಾಜ ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಡಿಸೆಂಬರ್ 31ರ ಬುಧವಾರ ದಂದು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಉದ್ಯೋಗ ಮೇಳದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೇಳವು ಸಂಜೀವಿನಿ-ಕೆ.ಎಸ್.ಆರ್.ಎಲ್.ಪಿ.ಎಸ್, ಡಿಡಿಯು-ಜಿಕೆ ಯೋಜನೆಯಡಿ ಜಿಲ್ಲೆಗಳಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಬೇಕಾಗಿದೆ. ಉದ್ಯೋಗ ಮೇಳದ ಅವಧಿಯಲ್ಲಿ ಉದ್ಯೋಗದಾತ ಸುಮಾರು 75 ಸಂಸ್ಥೆಗಳನ್ನು ಆಹ್ವಾನಿಸಬೇಕಾಗಿದ್ದು, ಮೇಳದಲ್ಲಿ ಕನಿಷ್ಠ 1500 ಜನ ಅಭ್ಯರ್ಥಿಗಳಿಗೆ ಉದ್ಯೋಗವಕಾಶವನ್ನು ಕಡ್ಡಾಯವಾಗಿ ಕಲ್ಪಿಸುವ ಗುರಿಯನ್ನು ನಿಗಧಿಪಡಿಸ

2ನೇ ಪುಟಕ್ಕೆ

ಮಲ್ಲಿಕಾರ್ಜುನ ಜಕ್ಕಲದಿನ್ನಿ - ಶರಣಪ್ಪಗೌಡ ನಕ್ಕುಂದಿಗೆ ಸನ್ಮಾನ



ಸಿರವಾರ.ಡಿ.31.

ಬಿಜೆಪಿ ಜಿಲ್ಲಾ ಉಪಾಧ್ಯಕ್ಷರಾಗಿ ನೇಮಕವಾದ ಮಲ್ಲಿಕಾರ್ಜುನ ಜಕ್ಕಲದಿನ್ನಿ ಹಾಗೂ ಶರಣಪ್ಪಗೌಡ ನಕ್ಕುಂದಿ ಇವರನ್ನು ದೇವರಾಜ ಗೌಡ ಮತ್ತು ಉಮಾಶಂಕರ್ ನೇತೃತ್ವದಲ್ಲಿ ಬಿಜೆಪಿ ಸಿರವಾರ ಮಂಡಲ ಹಾಗೂ ಪಟ್ಟಣ ಪಂಚಾಯತ್ ಬಿಜೆಪಿಯ ಸರ್ವ ಸದಸ್ಯರು ಹಾಗೂ ಸನ್ಮಾನಿಸಲಾಯಿತು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜರುಗಿದ ಈ ಸನ್ಮಾನ ಸಮಾರಂಭದಲ್ಲಿ ವಿಎಸ್ ಎಸ್ ಎನ್ ಉಪಾಧ್ಯಕ್ಷ

ನಾಗರಾಜಗೌಡ, ಗುರುಗೌಡ, ಬಿಜೆಪಿ ಮಾಜಿ ಜಿಲ್ಲಾ ಉಪಾಧ್ಯಕ್ಷ ನರಸಿಂಹ ರಾವ ಕುಲಕರ್ಣಿ, ಪ.ಪಂ ಸದಸ್ಯರಾದ ಸಂದೀಪ್ ಪಾಟೀಲ್, ಅಜೀತ್ ಕುಮಾರ ಹೊನ್ನಟಗಿ, ವಿನಾಯಕ, ಮಲ್ಲಪ್ಪ, ಅನೀಲ್ ಕುಮಾರ ವಕೀಲ್, ಡೇವಿಡ್, ತಾಯಣ್ಣ ವಕೀಲ್, ನದೀಮ್, ಮಾರೇಪ್ಪ, ಮುತ್ತಣ್ಣ, ಜಯರಾಜ, ದುರುಗಪ್ಪ, ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.

ಎಂ. ನಾಗರಾಜ ನಾಯಕ ಜಿಲ್ಲಾ ಸಂಚಾಲಕರಾಗಿ ಆಯ್ಕೆ



ಸಿರವಾರ.ಡಿ.31.

ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾ ಸಮಿತಿ (ರಿ) ಜಿಲ್ಲಾ ಸಮಿತಿಯ ಸಂಚಾಲಕರಾಗಿ ನೇಮಕ ಮಾಡಲು ಸಂಘದ ಜಿಲ್ಲಾಧ್ಯಕ್ಷರಾದ ಶ್ರೀ ರವಿ ಬಿ. ನಾಯಕ ಮಾಕಪೂರ ಲಿಂಗಸೂಗೂರು ಇವರ ಘನ ಅಧ್ಯಕ್ಷತೆಯಲ್ಲಿ ಸಭೆ ಸೇರಿ, ರಾಯಚೂರು ಜಿಲ್ಲೆಯ ಜಿಲ್ಲಾ ಸಂಚಾಲಕರಾಗಿ 3 ವರ್ಷಗಳ ಅವಧಿಗೆ ನೇಮಕಾತಿ ಮಾಡಿರು ವುದಕ್ಕೆ. ರವಿ ಬಿ ನಾಯಕ ಮಕಾಪುರ ಜಿಲ್ಲಾಧ್ಯಕ್ಷರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಪ್ಪ

2ನೇ ಪುಟಕ್ಕೆ

ಅಕ್ಕ ಪಡೆ ವಾಹನಕ್ಕೆ ಎಸ್ಪಿ ಪುಟ್ಟಮಾದಯ್ಯ ಚಾಲನೆ



ರಾಯಚೂರು,ಡಿ.31–

ರಾಯಚೂರು ಜಿಲ್ಲಾ ಪೊಲೀಸ್ ಕಚೇರಿಯ ಕವಾಯತು ಮೈದಾನದಲ್ಲಿ ಇಂದು ರಾಯಚೂರು ಜಿಲ್ಲೆಯ ಪೊಲೀಸ್ ಅಧೀಕ್ಷಕರಾದ ಶ್ರೀ ಪುಟ್ಟಮಾದಯ್ಯ ಎಂ. ಅವರು ಮಹಿಳೆಯರು ಮತ್ತು ಮಕ್ಕಳ ರಕ್ಷಣೆಗೆ ಸಮರ್ಪಿತವಾದ ಅಕ್ಕ ಪಡೆ' ವಾಹನಕ್ಕೆ ಚಾಲನೆ ನೀಡಿದರು.

ಕರ್ನಾಟಕ ಸರ್ಕಾರದ ಮಹತ್ವದ ಯೋಜನೆಯಾದ ಅಕ್ಕ ಪಡೆ, ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಾರ್ವಜನಿಕ ಸ್ಥಳಗಳಲ್ಲಿ ಗಸ್ತು ತಿರುಗುವ ಮೂಲಕ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಯನ್ನು ಖಚಿತಪಡಿಸುವ ಕೆಲಸ ಮಾಡುತ್ತಿದೆ. ಚುಡಾಯಿಸುವಿಕೆ, ದೌರ್ಜನ್ಯ ಸೇರಿದಂತೆ ಮಹಿಳೆಯರಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸುವ ವ್ಯವಸ್ಥೆಯನ್ನು ಈ ಪಡೆ ಹೊಂದಿದೆ.

ಅಕ್ಕ ಪಡೆ ಆರಂಭದಿಂದ ಹೆಣ್ಣುಮಕ್ಕಳಲ್ಲಿ ಸುರಕ್ಷತಾ ಭಾವನೆ ಹಾಗೂ ಸಾರ್ವಜನಿಕರಲ್ಲಿ ವಿಶ್ವಾಸ

2ನೇ ಪುಟಕ್ಕೆ

ಒಂದನೇಯ ಪುಟದಿಂದ

ಭೂಮಿ ಅತಿಕ್ರಮಣ-ನಕಲು ದಾಖಲೆ ಸೃಷ್ಟಿ ಆರೋಪ

ಅಂಬೋಜಿ ರಾವ್ ಕುಟುಂಬದ ವಿರುದ್ಧ ಗಡಿಪಾರಿಗೆ ಪ್ರವೀಣ್ ಕುಮಾರ್ ಆಗ್ರಹ

ದೂರಿದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಧಾರ್ಕಾ ರಾವ್ ತಂದೆ ದತ್ತುರಾವ್ ಅವರು ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ದೂರು ಸಲ್ಲಿಸಿದ್ದರೂ ಇದುವರೆಗೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದಕ್ಕೂ ಮುನ್ನ ಎ/ಸಿ ಕೋರ್ಟ್ ಮುಖಾಂತರ ಆರ್‌ಆರ್ಟಿ ಕೋರ್ಟ್‌ನಲ್ಲಿ ನಡೆದ ವಿಚಾರಣೆಯಲ್ಲಿ, ಅಂಬೋಜಿ ರಾವ್ ತಂದೆ ಹೀರಲಾಲ್ ಅವರು ಸ್ವಯಂ ಇಚ್ಛೆಯಿಂದ ಈ ಜಮೀನು ನನ್ನದು ಅಲ್ಲ, ನನ್ನಿಂದ ತಪ್ಪಾಗಿದೆ ಎಂದು ನ್ಯಾಯಾಲಯದ ಮುಂದೆ ತಪ್ಪು ಒಪ್ಪಿಕೊಂಡು, ಜಮೀನು ಪಟ್ಟಾದಾರರು ಸುಧಾರ್ಕಾ ರಾವ್ ತಂದೆ ದತ್ತುರಾವ್ ಅವರೇ ಎಂದು ಲಿಖಿತವಾಗಿ ಒಪ್ಪಿಗೆ ನೀಡಿರುವುದಾಗಿ ತಿಳಿಸಿದರು. ಇದರಿಂದ ಪಹಣಿ ದಾಖಲೆಗಳು ಮತ್ತೆ ಮೂಲ ಸ್ಥಿತಿಗೆ ಮರಳಿವೆ ಎಂದು ಹೇಳಿದರು.

ಭೂ ಮಾಫಿಯಾ ಹಾಗೂ ಅಕ್ರಮ ವಂಚಕರೊಂದಿಗೆ ಕೈಜೋಡಿಸಿರುವ ಅಧಿಕಾರಿಗಳ ವಿರುದ್ಧವೂ ಕಠಿಣ ಕ್ರಮ ಕೈಗೊಳ್ಳಬೇಕು. ನಕಲು ದಾಖಲೆಗಳನ್ನು ಸೃಷ್ಟಿಸಿ ಸಮಾಜವನ್ನು ದಿಕ್ಕುತಪ್ಪಿಸುವ ಇಂತಹ ವ್ಯಕ್ತಿಗಳ ವಿರುದ್ಧ ಸರ್ಕಾರ ಕೂಡಲೇ ಕ್ರಮ ವಹಿಸಬೇಕು ಎಂದು ಪ್ರವೀಣ್ ಕುಮಾರ್ ಒತ್ತಾಯಿಸಿದರು.

ಈ ಸುದ್ದಿಗೋಷ್ಠಿಯಲ್ಲಿ ಡಿಎಸ್‌ಎಸ್ ಯುವ ಘಟಕ ಅಧ್ಯಕ್ಷ ಜಯರಾಮ್ ನಾಗಲಾಪುರ, ಮಂಜು ಮಾರಪ್ಪ, ಮಂಜುನಾಥ್ ಜಿಲಾನಿ, ಶಿವು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಅನಧಿಕೃತ ತರಕಾರಿ ಮಾರುಕಟ್ಟೆ ತೆರವುಗೊಳಿಸಲು ಆಗ್ರಹ

ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಮಹಾರ್ವೀ ಆರೋಪಿಸಿದರು. ಖಾಸೀಂ, ವಸೀಂ, ಬಾಬಾ ಹಾಗೂ ರಘು ಎಂಬವರು ನಾನು ಲಂಚ ಸ್ವೀಕರಿಸುತ್ತಿದ್ದೇನೆ ಎಂದು ಆರೋಪಿಸಿರುವುದು ಸಂಪೂರ್ಣ ಅಸತ್ಯ ಹಾಗೂ ಖಂಡನೀಯ. ನಾನು ಲಂಚ ಸ್ವೀಕರಿಸಿರುವುದನ್ನು ಸಾಬೀತುಪಡಿಸಿದರೆ ಯಾವುದೇ ಶಿಕ್ಷೆಗೆ ಸಿದ್ಧನಿದ್ದೇನೆ. ಇಲ್ಲದಿದ್ದರೆ, ಸುಳ್ಳು ಆರೋಪ ಮುಂದುವರಿಸಿದಲ್ಲಿ ಅವರ ವಿರುದ್ಧ ಐಪಿಸಿ ಸೆಕ್ಷನ್ 499 (ಅಪಕೀರ್ತಿ) ಅಡಿಯಲ್ಲಿ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲಾಗುವುದು ಎಂದು ಎಚ್ಚರಿಸಿದರು.

ಇನ್ನೊಂದೆಡೆ, ಎಪಿಎಂಸಿ ಲೀಸ್ ಹಾಗೂ ನಿವೇಶನ ಹಂಚಿಕೆ ಪ್ರಕ್ರಿಯೆ ಡಿಸೆಂಬರ್ 2022ರಲ್ಲಿ ಎಪಿಎಂಸಿ ಕಾಯ್ದೆಯನ್ವಯ ಆರಂಭಗೊಂಡಿತ್ತು. ಹಲವು ಅಡೆತಡೆಗಳ ನಂತರ 2024ರ ಜೂನ್-ಜುಲೈ ತಿಂಗಳಲ್ಲಿ ಆಡಳಿತ ಮಂಡಳಿ, ಗ್ರಾಮಾಂತರ ಶಾಸಕರು ಹಾಗೂ ಎಪಿಎಂಸಿಯಿಂದ ಅನುಮತಿ ದೊರಕಿತ್ತು. ಆದರೆ ಏಕಾಏಕಿ ಆಗಸ್ಟ್-ಸೆಪ್ಟೆಂಬರ್ ತಿಂಗಳಲ್ಲಿ ಸಿಬ್ಬಂದಿಯಿಂದ ನಿವೇಶನ ಹಂಚಿಕೆ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿರುವುದಕ್ಕೆ ಕಾರಣಗಳನ್ನು ಸ್ಪಷ್ಟಪಡಿಸಬೇಕೆಂದು ಅವರು ಆಗ್ರಹಿಸಿದರು.

ಈ ಕುರಿತು ಸಂಘವು ಗ್ರಾಮಾಂತರ ಶಾಸಕರು, ಎಪಿಎಂಸಿ ಆಡಳಿತ ಮಂಡಳಿಯ ಅಧ್ಯಕ್ಷ-ಉಪಾಧ್ಯಕ್ಷರು ಹಾಗೂ ಸಂಬಂಧಪಟ್ಟ ಸಿಬ್ಬಂದಿಗಳಿಗೆ ನಿರಂತರವಾಗಿ ಮನವಿ ಸಲ್ಲಿಸುತ್ತಿದೆ. ಕೂಡಲೇ ನಿವೇಶನ ಹಂಚಿಕೆ ಪ್ರಕ್ರಿಯೆಯನ್ನು ಪುನರಾರಂಭಿಸದಿದ್ದಲ್ಲಿ, ಕಾನೂನಿನನ್ವಯ ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡಗಳ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ಸಂಘ ತೀರ್ಮಾನಿಸಿದೆ ಎಂದು ಮಹಾರ್ವೀ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪ್ರಭುನಾಯಕ, ಕೆ.ವಿ. ಖಾಜಪ್ಪ, ಬಸವರಾಜ, ರಿಜ್ವಾನ್ ಹಾಗೂ ತಿಮ್ಮಾರೆಡ್ಡಿ ಉಪಸ್ಥಿತರಿದ್ದರು.

ಸಿಎಂ ಸಿದ್ಧರಾಮಯ್ಯ ದಿ.3ರಂದು ಜಿಲ್ಲೆಯಲ್ಲಿ ಪ್ರವಾಸ

ವ್ಯವಸ್ಥಾಪನಾ ಸಮಿತಿಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿರುವ ಶ್ರೀ ಅಂಬಾ ಮಹೋತ್ಸ ವ-2026ರ ಜಾತ್ರಾ ಮಹೋತ್ಸ ವ, ಶ್ರೀ ಅಂಬಾದೇವಿ ಮಹಾರಥೋತ್ಸ ವ ಮತ್ತು ಜಂಬೂ ಸವಾರಿಗೆ ಚಾಲನೆ ಹಾಗೂ ಸಿಂಧನೂರು ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

ಸಂಜೆ 5 ಗಂಟೆಗೆ ಸೋಮಲಾಪುರ ಗ್ರಾಮದ ಶ್ರೀ ಅಂಬಾಮಠದ ಆವರಣದ ಹೆಲಿಪ್ಯಾಡನಿಂದ ನಿರ್ಗಮಿಸಿ, 5.30ಕ್ಕೆ ಬಳ್ಳಾರಿ ಜಿಲ್ಲೆಯ ತೋರಣಗಲ್ಲು ಏರಸ್ಟ್ರಿಪಗೆ ತೆರಳಿ, ಅಲ್ಲಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿನತ್ತ ಪ್ರಯಾಣ ಬೆಳೆಸುವರು ಎಂದು ಮುಖ್ಯಮಂತ್ರಿಗಳ ವಿಶೇಷ ಕರ್ತವ್ಯಾಧಿಕಾರಿಗಳಾದ ಕೆ.ಚಿರಂಜೀವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಶ್ವ ವಿಕಲಚೇತನರ ದಿನಾಚರಣೆ

ವಿಕಲಚೇತನರು ಸಮಾಜದ ಮುಖ್ಯವಾಹಿನಿಗೆ ಬರಬೇಕು:ಎಡಿಸಿ

ಜ್ಞಾನ, ಕೌಶಲ್ಯ ಅಡಗಿರುತ್ತದೆ. ವಿಕಲಚೇತನರು ಸಕರಾತ್ಮಕವಾಗಿ ಆಲೋಚನೆ ಮಾಡಬೇಕು. ಸವಾಲುಗಳನ್ನು ಸ್ವೀಕರಿಸಿ ಮುನ್ನಡೆಯಬೇಕು. ಉನ್ನತ ಶಿಕ್ಷಣವನ್ನು ಪಡೆದು ಅಭಿವೃದ್ಧಿಯಾಗಬೇಕು. ವಿಕಲಚೇತನರು ವಿಶೇಷಚೇತನರು. ನಿಮ್ಮಲ್ಲಿ ವಿಶೇಷ ಸಾಮರ್ಥ್ಯ, ಜ್ಞಾನ, ಆಲೋಚನೆಯಿಂದ ಅಭಿವೃದ್ಧಿ ಯಾಗಬೇಕು ಎಂದು ಕಿವಿಮಾತು ಹೇಳಿದರು.

ವಿಕಲಚೇತನರು ಎಲ್ಲಾ ರಂಗದಲ್ಲಿ ಮುಂದೆ ಇದ್ದಾರೆ. ಸಾಧನೆಗೆ ಯಾವುದೇ ಅಂಗವಿಕಲತೆ ಅಡ್ಡಿಯಾಗದು. ಸಾಧನೆಗೆ ಸದೃಢ ಮನಸ್ಸು ಇರಬೇಕು. ಎಲ್ಲರೂ ಸೇರಿ ಸರ್ಕಾರದ ವಿವಿಧ ಸೌಲಭ್ಯಗಳನ್ನು ಅರ್ಹ ವಿಕಲಚೇತನರಿಗೆ ತಲುಪಿಸೋಣ ಎಂದರು.

ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್ ಅವರು ಮಾತನಾಡಿ, ಸರ್ಕಾರ ಯಾವಾಗ್ಲೂ ನಿಮ್ಮ ಪರ ಇರುತ್ತದೆ. ನೀವು ನಿರಾಶಕ್ತಿಗೊಳ್ಳದೆ. ನಿಮ್ಮ ಸಮಸ್ಯೆಗಳನ್ನು ನಮ್ಮತ್ರ ಹೇಳಿದ್ದಲ್ಲೇ ಸಮಸ್ಯೆಗಳನ್ನು ಬಗೆಹರಿಸಿ ನಾವು ಸದಾ ನಿಮ್ಮ ಪರ ಇರುತ್ತೇವೆ ಎಂದು ಹೇಳಿದರು.

ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಹಾಗೂ ಈಚೆಗೆ ನಡೆದ ಕ್ರೀಡೆಗಳಲ್ಲಿ ವಿಜೇತರಾದ ವಿಕಲಚೇತನರನ್ನು ಸನ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಸಹ ಕಾರ್ಯದರ್ಶಿ ಡಾ.ದಂಡಪ್ಪ ಬಿರಾದಾರ್, ಎಮ್.ಕೆ.ಭಂಡಾರಿ ಆಸ್ಪತ್ರೆಯ ವ್ಯವಸ್ಥಾಪಕರಾದ ರಿಯೋಜ್ ಸೇರಿದಂತೆ ವಿವಿಧ ಸಂಘ ಸಂಸ್ಥೆಯ ಮುಖಂಡರು ಇದ್ದರು.

ಉದ್ಯೋಗ ಮೇಳದ ಪೂರ್ವಭಾವಿ ಸಭೆ

ಉದ್ಯೋಗ ಮೇಳ ಯಶಸ್ವಿಗೆ ಸಿದ್ಧತೆ ಮಾಡಿಕೊಳ್ಳಿ: ಶರಣಬಸವರಾಜ

ಲಾಗಿದೆ. ಅಲ್ಲದೆ ಈ ಮೇಳದ ಎಲ್ಲಾ ಚಟುವಟಿಕೆಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡುವ ಮೂಲಕ ವ್ಯಾಪಕ ಪ್ರಚಾರ ಕಾರ್ಯಗಳನ್ನು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕೈಗೊಳ್ಳಬೇಕು ಎಂದರು.

ಮೇಳಯು ರಾಯಚೂರಿನ ಕೃಷಿ ವಿಶ್ವವಿದ್ಯಾಲಯದಲ್ಲಿ ಜನವರಿ ತಿಂಗಳಲ್ಲಿ ನಡೆಸಲಾಗುತ್ತಿದ್ದು, ಮೇಳದಲ್ಲಿ ಎಸ್‌ಎಸ್‌ಎಲ್‌ಸಿಯಿಂದ ಮೊದಲುಗೊಂಡು ಪಿಯುಸಿ, ಸಾಮಾನ್ಯ ಪದವಿ, ಡಿಪ್ಲೊಮಾ, ಐಟಿಐ, ಎಂಜಿನಿಯರಿಂಗ್ ಸೇರಿದಂತೆ ವಿವಿಧ ಕೋರ್ಸ್‌ಗಳನ್ನು ಕಲಿತವರಿಗೆ ಉದ್ಯೋಗಾವಕಾಶ ಕಲ್ಪಿಸಲು ವೇದಿಕೆ ಸಜ್ಜುಗೊಳಿಸಲಾಗಿದೆ. ರಾಜ್ಯದ ವಿವಿಧ ಜಿಲ್ಲೆಗಳಿಂದ 75 ಉದ್ಯೋಗದಾತರು (ಕಂಪೆನಿಗಳು) ಭಾಗವಹಿಸಲಿದ್ದು, ಆಸಕ್ತ ಅಭ್ಯರ್ಥಿಗಳು ನೋಂದಣಿ ಮಾಡಿಕೊಳ್ಳಬೇಕು. ಮೇಳದಲ್ಲಿ ಆಯ್ಕೆಯಾದವರಿಗೆ ಸ್ಥಳದಲ್ಲಿಯೇ ಆಫರ್ ಲೆಟರ್ ಕೊಡಲಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಧಿಕಾರಿ ವಿಜಯಶಂಕರ್, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುದೇಡ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೋಕ್ರಾಣಿ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಉಪ ನಿರ್ದೇಶಕರಾದ ರಾಜಕುಮಾರ್ ಪಾಟೀಲ್, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕೆ ಸಂಘದ ಕಾರ್ಯದರ್ಶಿ ಜಂಬಣ್ಣ ಸೇರಿದಂತೆ ವಿವಿಧ ಕಾಲೇಜಿನ ಪ್ರಾಚಾರ್ಯರು, ಉಪನ್ಯಾಸಕರು ಸಭೆಯಲ್ಲಿ ಇದ್ದರು.

ಎಂ. ನಾಗರಾಜ ನಾಯಕ ಜಿಲ್ಲಾ ಸಂಚಾಲಕರಾಗಿ ಆಯ್ಕೆ

ನಾಯಕ ಜಿಲ್ಲಾ ಕಾರ್ಯಾಧ್ಯಕ್ಷರು ಶಿವರಾಜ್ ನಾಯಕ್ ಯಮನಾಳ ಸಿರವಾರದ ಮುಖಂಡರುಗಳಾದ ಮಂಜುನಾಥ್ ನಾಯಕ್ ಮರಾಠ ಹನುಮಂ ತರಾಯ ನಾಯಕ್ ಆಂಜನೇಯ ನಾಯಕ್ ಸಾಬಣ್ಣ ನಾಯಕ ರಮೇಶ್ ನಾಯಕ್ ದೊರೆ ಉದಯ್ ಕುಮಾರ ದೊರೆ ಗೋವಿಂದ್ ರಾಜ ಮರಾಠ ಇವರುಗಳಿಂದ ಸನ್ಮಾನಿಸಲಾಯಿತು.

ಅಕ್ಕ ಪಡೆ ವಾಹನಕ್ಕೆ ಎಸ್ಪಿ ಪುಟ್ಟಮಾದಯ್ಯ ಚಾಲನೆ


ಹೆಚ್ಚಾಗಲಿದೆ ಎಂದು ಪೊಲೀಸ್ ಅಧೀಕ್ಷಕರು ತಿಳಿಸಿದರು. ಯಾವುದೇ ತುರ್ತು ಸಂದರ್ಭಗಳಲ್ಲಿ 1098 (ಮಕ್ಕಳ ಸಹಾಯವಾಣಿ), 181 (ಮಹಿಳಾ ಸಹಾಯವಾಣಿ) ಹಾಗೂ 112 (ಪೊಲೀಸ್ ತುರ್ತು ಸೇವೆ) ಸಂಖ್ಯೆಗಳಿಗೆ ಕರೆ ಮಾಡುವ ಮೂಲಕ ಸಹಾಯ ಪಡೆಯಬಹುದಾಗಿದೆ

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಕಲ್ಲೂರು: ಆರೋಗ್ಯ ಕೇಂದ್ರ, ನಾಡ ಕಾರ್ಯಲಯ, ಭೂಮಿಪೂಜೆ, ಗ್ರಾಮಗಳ ಅಭಿವೃದ್ಧಿಗೆ ಆದ್ಯತೆ- ಭೋಸರಾಜು

ಸಿರವಾರ,ಡಿ.31-

ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕ ಆರೋಗ್ಯ ಕಾಪಾಡಲು, ಸಾರ್ವಜನಿಕರ ಅನುಕೂಲಕ್ಕೆ ನಾಡ ಕಾರ್ಯಲಯ ಸೇರಿದಂತೆ ಹಲವಾರು ಅಭಿವೃದ್ಧಿ ಕಾರ್ಯಗಳ ಮೂಲಕ ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ ಎಂದು ವಿಜ್ಞಾನ ತಂತ್ರಜ್ಞಾನ ಹಾಗೂ ಸಣ್ಣ ನೀರಾವರಿ ಸಚಿವರಾದ ಎನ್.ಎಸ್.ಭೋಸರಾಜು ಹೇಳಿದರು.



ಅವರು ಮಂಗಳವಾರ ತಾಲೂಕಿನ ಕಲ್ಲೂರಿನ ಗ್ರಾಮದಲ್ಲಿ ನಾಡ ಕಾರ್ಯಲಯದ ನೂತನ ಕಟ್ಟಡ 40ಲಕ್ಷ ರೂಪಾಯಿ, ಕ್ಯಾಷ್ಯೂ ಟೇಕ್ ನಿರ್ಮಿತ ಕೇಂದ್ರ, ಪ್ರಾಥಮಿಕ ಆರೋಗ್ಯ ಉಪಕೇಂದ್ರ ನಿರ್ಮಾಣಕ್ಕೆ 63ಲಕ್ಷ ರೂಪಾಯಿ 15ನೇ ಹಣಕಾಸು ಯೋಜನೆಯಲ್ಲಿ ನಿರ್ಮಾಣ ಭೂಮಿ ಪೂಜೆಯ ಮೂಲಕ ಚಾಲನೆ ನೀಡಿ ಮಾತನಾಡಿ

ಗ್ರಾಮದ ಜನರಿಗೆ ಇದರಿಂದ ಅನುಕೂಲ ವಾಗಲಿದೆ ಎಂದು ಹಲವಾರು ಕಾರ್ಯಗಳನ್ನು ಕೈಗೊಂಡಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಶಾಸಕರಾದ ಹಂಪಯ್ಯ ನಾಯಕ, ಭೀಮರಡ್ಡೆಪ್ಪಗೌಡ, ಗ್ರಾ.ಪಂ.ಅಧ್ಯಕ್ಷ ಸಂಗಪ್ಪಗೌಡ, ಎ.ವೀರೇಶ, ಎ.ಬಸವರಾಜ, ಸಿ. ಅಮರಪ್ಪಗೌಡ, ಗುರುಸ್ವಾಮಿ ಯಾದವ್, ರಾಮಚಂದ್ರ ಯಾದವ್, ಶಿವಶಂಕರ, ಜುಟ್ಲ್ ನರಸಪ್ಪ, ಲಕ್ಷ್ಮಣ ಯಾದ್ವ, ಕೆ.ಭೀಮಣ್ಣ ಹಾಗೂ ಗ್ರಾ.ಪಂ. ಸರ್ವ ಸದಸ್ಯರು, ತಹಶಿಲ್ದಾರರ ಅಶೋಕ ಪವಾರ, ಇಓ ಶಶಿಧರಸ್ವಾಮಿ, ವೆಂಕಟೇಶ ಸಿಂಗ್ ಹಜಾರಿ, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಶರಣಬಸವ ಪಾಟೀಲ, ಡಾ.ಸಂಗಮೇಶ ಹಾಗೂ ಸಿಬ್ಬಂದಿ, ಗ್ರಾಮದ ಮುಖಂಡರು ಭಾಗವಹಿಸಿದ್ದರು.

ಜಿಲ್ಲಾ ಆರೋಗ್ಯ ಸಂಘದ ಸಮಿತಿ ಸಭೆಯಲ್ಲಿ ಜಿ.ಪಂ ಸಿಇಒ ಸೂಚನೆ

ಗರ್ಭಿಣಿ, ಬಾಣಂತಿಯರಿಗೆ ಸೇವೆಗಳನ್ನು ಒದಗಿಸಲು ಶ್ರಮಿಸಿ: ಈಶ್ವರ ಕುಮಾರ

ರಾಯಚೂರು ಡಿ.31

ಜಿಲ್ಲೆಯಲ್ಲಿ ಗರ್ಭಿಣಿ, ಬಾಣಂತಿಯರಿಗೆ ಗುಣಮಟ್ಟದ ಚಿಕಿತ್ಸೆ ನೀಡಲು ಸಂಬಧಿಸಿದ ಅಧಿಕಾರಿಗಳು ಶ್ರಮಿಸಬೇಕು. ಅಲ್ಲದೆ ಹೆರಿಗೆ ಸಮಯದಲ್ಲಿ ತಾಯಂದಿರಿಗೆ ರಕ್ತ ಒದಗಿಸಲು ದಾನಿಗಳ ಸಂಪರ್ಕ ಸಾಧಿಸಿ ತಾಯಿಯ ಮರಣವಾಗದಂತೆ ನೋಡಿಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಡಿಸೆಂಬರ್ 30ರ ಮಂಗಳವಾರ ದಂದು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಸಂಘದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗರ್ಭಿಣಿ ಅವಧಿ ಸೇರಿದಂತೆ ಹೆರಿಗೆ ಸಂದರ್ಭದಲ್ಲಿ ಸುರಕ್ಷಿತ ಹೆರಿಗೆ ಕೈಗೊಳ್ಳಲು ಅಪರೂಪದ ರಕ್ತದ ಗುಂಪು ಹೊಂದಿದ ತಾಯಂದಿರಿಗೆ ರಕ್ತ ಒದಗಿಸಲು ದಾನಿಗಳ ಸಂಪರ್ಕ ಸಾಧಿಸುವುದರೊಂದಿಗೆ ಎಲ್ಲ ಸರಕಾರಿ ಹಾಗೂ ಖಾಸಗಿ ರಕ್ತ ಬ್ಯಾಂಕ್‌ಗಳಲ್ಲಿ ತಪ್ಪದೆ ರಕ್ತವನ್ನು ಸಂಗ್ರಹಿಸಲು ಜಿಲ್ಲೆಯಾದ್ಯಂತ ಅಧಿಕಾರಿಗಳು ನಿಗಾವಹಿಸಿ, ತಾಯಿ ಮರಣವಾಗದಂತೆ ಶ್ರಮಿಸಬೇಕೆಂದು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ತಾಯಿಮರಣ ಗಣನೀಯವಾಗಿ ಕಡಿಮೆಯಾಗುತ್ತಿದ್ದು, ಕ್ಷೇತ್ರ ಮಟ್ಟದಲ್ಲಿ ವೈದ್ಯರಿಂದ ಹಿಡಿದು ಪಿಹೆಚ್‌ಸಿಓ, ಆಶಾ ಕಾರ್ಯಕರ್ತೆವರೆಗೆ ತಂಡವಾಗಿ ಕಾರ್ಯ ನಿರ್ವಹಿಸುತ್ತಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ಮಾನ್ಯ ಮುಖ್ಯಮಂತ್ರಿಗಳು ಅವರ ನಿರ್ದೇಶನದಂತೆ ತಾಯಿ ಮರಣ ನಿಯಂತ್ರಣ ಕ್ರಮಗಳನ್ನು ತೆಗೆದುಕೊಂಡು ಇನ್ನಷ್ಟು ಹೆಚ್ಚಿನ ಪ್ರಮಾಣದಲ್ಲಿ ಕೆಲಸ ಮಾಡಬೇಕೆಂದರು.


ಗರ್ಭಿಣಿಯೆದು ತಿಳಿದ ದಿನದಂದ ಕಬ್ಬಿಣಾಂಶ ಪ್ರಮಾಣ ಕಡಿಮೆಯಾಗದಂತೆ ಕಬ್ಬಿಣಾಂಶ ಮಾತ್ರೆ, ಐರನ್ ಸುಕ್ರೋಸ್ ಒದಗಿಸುವುದು, ಅಗತ್ಯವಿದ್ದಲ್ಲಿ ರಕ್ತಪೂರಣ ಮಾಡಿಸಲು ಕ್ರಮವಹಿಸಬೇಕು. ಇತರೆ ಆರೋಗ್ಯ ಸಮಸ್ಯೆಗಳನ್ನು ಗುರ್ತಿಸಿ ಸೂಕ್ತವ ಚಿಕಿತ್ಸೆ ನೀಡಲು ತಂಡವಾಗಿ ಕಾರ್ಯನಿರ್ವಹಿಸಬೇಕೆಂದರು.


ಸಾಮಾನ್ಯವಾಗಿ ಗರ್ಭಿಣಿ ಮತ್ತು ಬಾಣಂತಿಯರಲ್ಲಿ ಕಬ್ಬಿಣಾಂಶ ಕೊರತೆ, ಅಧಿಕ ರಕ್ತದೊತ್ತಡ, ಡಯಾಬಿಟಿಸ್, ತೂಕ ಪ್ರಮಾಣ ಸೇರಿದಂತೆ ಇತರೆ ಅಂಶಗಳು ಏರಿಳಿತಗೊಳ್ಳುತ್ತದೆ. ಇದಕ್ಕೆ ಸಕಾಲದಲ್ಲಿ ತಪಾಸಣೆ ಮಾಡಿಕೊಳ್ಳಲು ಸೂಚಿಸಬೇಕು. ಅಲ್ಲದೆ ಗರ್ಭಿಣಿಯರು ತಪಾಸಣೆಗೆ ಆಗಮಿಸುವ ಸಮಯದಲ್ಲಿ ಇವರಿಗೆ ದೇಹದಲ್ಲಿ ಯಾವ ಅಂಶಗಳ ಪ್ರಮಾಣ ಕಡಿಮೆ ಅಥವಾ ಹೆಚ್ಚು ಇದೆ. ಎಂಬುದನ್ನು ಖಾತ್ರಿ ಪಡಿಸಿ ಕೊಂಡು ವೈದ್ಯಾಧಿಕಾರಿಗಳು, ತಾಯಿ ಕಾರ್ಡ್‌ಗಳಲ್ಲಿ ನಮೂದಿಸಬೇಕು ಎಂದು ಸಂಬಧಿಸಿದ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಬಾಲ್ಯವಿವಾಹ ತಡೆಗೆ ಕ್ರಮ: ಬಾಲ್ಯ ವಿವಾಹ ಅದರಲ್ಲೂ ಹೆಣ್ಣುಮಕ್ಕಳ ಬಾಲ್ಯ ವಿವಾಹ ತಡೆಗೆ ಎಲ್ಲ ಮುಂಚೂಣಿ ಇಲಾಖೆಗಳು ಸಮನ್ವಯದೊಂದಿಗೆ ನಿರಂತರ ಜಾಗೃತಿ ನೀಡಬೇಕು. ಹಾಗೂ ಆರೋಗ್ಯ ಇಲಾಖೆಯು ತಜ್ಞವೈದ್ಯರ ಮೂಲಕ ತಪಾಸಣಾ ಶಿಬಿರವನ್ನು ಕಾಲ-ಕಾಲಕ್ಕೆ ಏರ್ಪಡಿಸಬೇಕು ಅಲ್ಲದೆ ಅಪೌಷ್ಟಿಕ ಮಕ್ಕಳ ತಡೆಗೆ ರಿಮ್ಸ್ ಹಾಗೂ ಎಲ್ಲ ತಾಲೂಕು ಆಸ್ಪತ್ರೆಗಳಲ್ಲಿ ಇರುವ ಪೌಷ್ಟಿಕ ಪುನಶ್ಚೇತನ ಕೇಂದ್ರ (ಎನ್‌ಆರ್‌ಸಿ) ಗಳಿಗೆ ಮಕ್ಕಳನ್ನು 14 ದಿನಗಳವರೆಗೆ ಕಳುಹಿಸಲು ಪಾಲಕರಿಗೆ ತಿಳಿಹೇಳಬೇಕು ಎಂದರು.

ಇದೇ ಸಂಧರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ ಚಿಕಿತ್ಸ ಡಾ.ವಿಜಯ ಶಂಕರ, ಜಿಲ್ಲಾ ಆರ್.ಸಿ.ಹೆಚ್ ಡಾ.ನಂದೀತಾ ಎಮ್.ಎನ್., ಡಿಪಿಡಿಓ ಡಾ. ಚಂದ್ರಶೇಖರಯ್ಯ, ಡಿಎಸ್ಓ ಡಾ.ಗಣೇಶ್ ಕೆ., ಜಿಲ್ಲಾ ಎನ್‌ಫೋರ್ಸ್‌ಮೆಂಟ್ ಅಧಿಕಾರಿ ಡಾ.ಶಿವಕುಮಾರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

ರಾಯಚೂರು ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಜಿಲ್ಲಾ ಉಪಾಧ್ಯಕ್ಷರಾಗಿ ಡಾ ಮೊಹಮ್ಮದ್ ಸುಹೈಲ್ ನಾಯಕ್ ನೇಮಕ





ರಾಯಚೂರು,ಡಿ.31-

ರಾಯಚೂರಿನ ಯುವ ಹೋರಾಟಗಾರ ಡಾ ಮೊಹಮ್ಮದ್ ಸುಹೈಲ್ ನಾಯಕ್ ಅವರನ್ನು ಕಾಂಗ್ರೆಸ್ ಪಕ್ಷದ ಅಲ್ಪಸಂಖ್ಯಾತ ಘಟಕದ ರಾಯಚೂರು ಜಿಲ್ಲಾ ಉಪಾಧ್ಯಕ್ಷರನ್ನಾಗಿ ಹಾಗೂ ಜಿಲ್ಲಾ ಕಾರ್ಯದರ್ಶಿಯಾಗಿ ಮೆಹಬೂಬ್ ಅವರನ್ನು ನೇಮಕ ಮಾಡಿ ಜಿಲ್ಲಾ ಅಧ್ಯಕ್ಷರಾದ ಸೈಯದ್ ಫಯಾಜು ದೀನ್ ಅವರು ಆದೇಶ ಹೊರಡಿಸಿದ್ದಾರೆ .

ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿ ಶ್ರೀ ಮೊಹಮ್ಮದ್ ಶಾಲಂ ಅವರು ಮತ್ತು ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಜಿಲ್ಲಾ ಅಧ್ಯಕ್ಷರಾದ ಸೈಯದ್ ಫಯಾಜು ದೀನ್ ಅವರು ಆದೇಶ ಪತ್ರವನ್ನು ನೀಡಿದರು .

ಈ ಸಂಧರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಯೂಸುಫ್ ಖಾನ್, ನರಸಿಂಹಲು ಮಾಡಗಿರಿ, ಶೌಕತ್ ಹಮ್ರಾಜ್ ಮತ್ತು ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು

ಹುಬ್ಬಳ್ಳಿಯಲ್ಲಿ ನಾನು ಮಾತನಾಡಿದ್ದು ಪೈರಸಿ ಎಂಬ ಯುದ್ಧದ ಬಗ್ಗೆ, ದುರಹಂಕಾರದಿಂದ ಅಲ್ಲ: ಸುದೀಪ್

ಸಿನಿಮಾ ಪೈರಸಿ ವಿರುದ್ಧ ನಾನು ಹೋರಾಟ ಮುಂದುವರೆಸುತ್ತೇನೆ. ಇದನ್ನು ಇಲ್ಲಿಗೆ ಬಿಡುವುದಿಲ್ಲ, ಚಿತ್ರರಂಗಕ್ಕೆ ಒಳ್ಳೆಯದಾಗಬೇಕು ಎಂದು ನಟ ಕಿಚ್ಚ ಸುದೀಪ್ ತಿಳಿಸಿದರು.

ಕಿಚ್ಚ ಸುದೀಪ್ ಅಭಿನಯ ಹಾಗೂ ವಿಜಯ್ ಕಾರ್ತಿಕೇಯನ್ ನಿರ್ದೇಶನದ 'ಮಾರ್ಕ್' ಸಿನಿಮಾ ಕಳೆದ ಕ್ರಿಸ್‌ಮಸ್ ದಿನದೊಂದು ಬಿಡುಗಡೆ ಆಗಿದ್ದು, ಎಲ್ಲಾ ಕಡೆ ಭರ್ಜರಿ ಪ್ರದರ್ಶನ ಕಾಣುತ್ತಿದೆ. ಅಷ್ಟೇ ಅಲ್ಲ, ಬಾಕ್ಸ್ ಆಫೀಸ್‌ನಲ್ಲಿ ಮಾರ್ಕ್ ₹35 ಕೋಟಿಗೂ ಹೆಚ್ಚು ಕಲೆಕ್ಷನ್ ಮಾಡುವ ಮೂಲಕ, ಈ ವರ್ಷದ ಹಿಟ್ ಸಾಲಿನಲ್ಲಿ ಸೇರಿಕೊಂಡಿದೆ. ಈ ಹಿನ್ನೆಲೆಯಲ್ಲಿ ಕಿಚ್ಚ ಸುದೀಪ್ ಹಾಗೂ ಚಿತ್ರತಂಡ ಬೆಂಗಳೂರಿನ ಕೆ.ಜಿ ರಸ್ತೆಯಲ್ಲಿರುವ ಸಂತೋಷ್ ಚಿತ್ರಮಂದಿರಕ್ಕೆ ಬಂದು ಅಭಿಮಾನಿಗಳೊಂದಿಗೆ ಚಿತ್ರ ವೀಕ್ಷಿಸಿ ಖುಷಿಪಟ್ಟರು.



ಉದ್ಯೋಗ ಮೇಳದ ಪೂರ್ವಭಾವಿ ಸಭೆ

ರಾಯಚೂರು,ಡಿ.31

ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸಲು ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಉದ್ಯೋಗ ಮೇಳಕ್ಕೆ ಬೇಕಾಗುವ ಎಲ್ಲಾ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಬೇಕು. ಅಲ್ಲದೆ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಿರುದ್ಯೋಗಿಗಳು ಭಾಗಿಯಾಗಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕರಾದ ಶರಣಬಸವರಾಜ ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಡಿಸೆಂಬರ್ 31ರ ಬುಧವಾರ ದಂದು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಉದ್ಯೋಗ ಮೇಳದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೇಳವು ಸಂಜೀವಿನಿ-ಕೆ.ಎಸ್.ಆರ್. ಎಲ್.ಪಿ.ಎಸ್, ಡಿಡಿಯು-ಜಿಕೆ ಯೋಜನೆಯಡಿ ಜಿಲ್ಲೆಗಳಲ್ಲಿ ಉದ್ಯೋಗ ಮೇಳವನ್ನು ಆಯೋಜಿ ಸಬೇಕಾಗಿದೆ. ಉದ್ಯೋಗ ಮೇಳದ ಅವಧಿಯಲ್ಲಿ ಉದ್ಯೋಗದಾತ ಸುಮಾರು 75 ಸಂಸ್ಥೆಗಳನ್ನು ಆಹ್ವಾನಿಸಬೇಕಾಗಿದ್ದು, ಮೇಳದಲ್ಲಿ ಕನಿಷ್ಠ 1500 ಜನ ಅಭ್ಯರ್ಥಿಗಳಿಗೆ ಉದ್ಯೋಗವಕಾಶವನ್ನು ಕಡ್ಡಾಯವಾಗಿ ಕಲ್ಪಿಸುವ ಗುರಿಯನ್ನು ನಿಗಧಿಪಡಿಸ ಲಾಗಿದೆ. ಅಲ್ಲದೆ ಈ ಮೇಳದ ಎಲ್ಲಾ ಚಟುವಟಿಕೆಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಮಾಡುವ ಮೂಲಕ ವ್ಯಾಪಕ ಪ್ರಚಾರ ಕಾರ್ಯಗಳನ್ನು ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕೈಗೊಳ್ಳಬೇಕು ಎಂದರು.

ಮೇಳಯು ರಾಯಚೂರಿನ ಕೃಷಿ ವಿಶ್ವವಿದ್ಯಾಲಯದಲ್ಲಿ ಜನವರಿ ತಿಂಗಳಲ್ಲಿ ನಡೆಸಲಾಗುತ್ತಿದ್ದು, ಮೇಳದಲ್ಲಿ ಎಸ್ಎಸ್ಎಲ್ಸಿಯಿಂದ ಮೊದಲುಗೊಂಡು ಪಿಯುಸಿ, ಸಾಮಾನ್ಯ ಪದವಿ, ಡಿಪ್ಲೊಮಾ, ಐಟಿಐ, ಎಂಜಿನಿಯರಿಂಗ್ ಸೇರಿದಂತೆ ವಿವಿಧ ಕೋರ್ಸ್ಗಳನ್ನು ಕಲಿತವರಿಗೆ ಉದ್ಯೋಗಾವಕಾಶ ಕಲ್ಪಿಸಲು ವೇದಿಕೆ ಸಜ್ಜುಗೊಳಿಸಲಾಗಿದೆ.













ನಾಡಿನ ಸಮಸ್ತ ಜನತೆಗೆ
ಹೊಸ ವರ್ಷದ ಹಾರ್ದಿಕ
ಶುಭಾಶಯಗಳು



ಶ್ರೀಮತಿ ತಾರಮ್ಮ ಗಂಡ ಜಯವಂತ
ಅಧ್ಯಕ್ಷರು ಗ್ರಾ.ಪಂ ಮಾಡಗಿರಿ



ಶ್ರೀ.ಲಿಂಗನಗೌಡ
ಉಪಾಧ್ಯಕ್ಷ ಗ್ರಾ.ಪಂ ಮಾಡಗಿರಿ

2026



ಶ್ರೀ.ವಿಜಯ ಕುಮಾರ್
ಪಿಡಿಓ ಗ್ರಾ.ಪಂ ಮಾಡಗಿರಿ

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು,
ಉಪಾಧ್ಯಕ್ಷರು, ಸರ್ವ ಸದಸ್ಯರು ಹಾಗೂ ಸಿಬ್ಬಂದಿ ವರ್ಗ
ಮಾಡಗಿರಿ ಗ್ರಾ.ಪಂ ಕಾರ್ಯಾಲಯ ತಾ:ಸಿರವಾರ ಜಿಲ್ಲಾ: ರಾಯಚೂರು

ನಾಡಿನ ಸಮಸ್ತ ಜನತೆಗೆ
ಹೊಸ ವರ್ಷದ ಹಾರ್ದಿಕ
ಶುಭಾಶಯಗಳು



ಶ್ರೀಮತಿ ಪಾರ್ವತಮ್ಮ
ಅಧ್ಯಕ್ಷರು ಗ್ರಾಮ.ಪಂ ಹೀರಾ



ಶ್ರೀಮತಿ ಯಲ್ಲಮ್ಮ
ಉಪಾಧ್ಯಕ್ಷರು ಗ್ರಾಂ.ಪಂ ಹೀರಾ

2026



ಶ್ರೀ.ಶರೀಫ್ ಸಾಬ್
ಪಿಡಿಓ ಗ್ರಾ.ಪಂ ಹರವಿ

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಅಧ್ಯಕ್ಷರು,
ಉಪಾಧ್ಯಕ್ಷರು, ಸರ್ವ ಸದಸ್ಯರು ಹಾಗೂ ಸಿಬ್ಬಂದಿ ವರ್ಗ
ಹೀರಾ ಗ್ರಾಮ ಪಂಚಾಯತ ಕಾರ್ಯಾಲಯ ತಾ:ಸಿರವಾರ ಜಿ: ರಾಯಚೂರು





ನಾಡಿನ ಸಮಸ್ತ ಬಾಂಧವರಿಗೆ
ಹೊಸ ವರ್ಷದ ಹಾರ್ದಿಕ
ಶುಭಾಶಯಗಳು

ಹೊಸ ವರ್ಷವು ನಿಮ್ಮೆಲ್ಲರ ಬದುಕನ್ನು ಬಂಗಾರದಂತೆ
ಮಾಡಲಿ. ಭಗವಂತನ ಕೃಪೆಯೊಂದಿಗೆ ನೆಮ್ಮದಿಯು ಸದಾ
ನಿಮ್ಮೊಂದಿಗಿರಲಿ.



ವಿಜಯ ಕುಮಾರ
ಪಿ.ಡಿ.ಓ., ನವಲಕಲ್

ಶ್ರೀಮತಿ. ದುರಗಮ್ಮ ಗಂಡ ದುರಗಪ್ಪ
ಗ್ರಾ.ಪಂ.ಅಧ್ಯಕ್ಷರು, ನವಲಕಲ್

ಶುಭಕೋರುವವರು:

ನವಲಕಲ್ ಗ್ರಾಮ ಪಂಚಾಯಿತಿ ಪಿ.ಡಿ.ಓ., ಅಧ್ಯಕ್ಷರು, ಉಪಾಧ್ಯಕ್ಷರು,
ಸರ್ವ ಸದಸ್ಯರು ಹಾಗೂ ಸಿಬ್ಬಂದಿ ವರ್ಗ

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR